**ಹಿರಿಯ ಸಿವಿಲ್ ನ್ಯಾಯಾಧಿಶರು ಮತ್ತು ಜೆಎಂಎಫ್ ಸಿ ರವರ ನ್ಯಾಯಾಲಯ,**

**ದೇವದುರ್ಗ.**

**ಸಿ.ಸಿ. ನಂ.700/2024**

ದೂರುದಾರರುಃ ಕರ್ನಾಟಕ ರಾಜ್ಯ,
ಗಬ್ಬೂರು ಪೋಲಿಸ್ ಠಾಣೆ.

**ವಿರುದ್ದ**

ಆರೋಪಿತರುಃ

1. ಧರ್ಮನಗೌಡ ತಂದೆ ಪರ್ವತರೆಡ್ಡಿ,
ವಯಸ್ಸು: 50 ವರ್ಷಗಳು, ಉಃ ಒಕ್ಕಲುತನ,

2. ವಿಶಾಲಾಕ್ಷಿ ಗಂಡ ಧರ್ಮನಗೌಡ,
ವಯಸ್ಸು: 45 ವರ್ಷಗಳು, ಉಃ ಮನೆಕೆಲಸ,
ಇಬ್ಬರೂ ಸಾಃ ಗಲಗ, ತಾಃ ದೇವದುರ್ಗ.

**ದೋಷರೋಪಣೆ**

ಶ್ರೀ. ಸುರೇಶ ಅಣ್ಣಪ್ಪ ಸವದಿ., ಹಿರಿಯ ಸಿವಿಲ್ ನ್ಯಾಯಾಧಿಶರು ಮತ್ತು ಜೆ.ಎಂ. ಎಫ್. ಸಿ ರವರ ನ್ಯಾಯಾಧೀಶರು, ದೇವದುರ್ಗ, ಈ ಮೂಲಕ ಆರೋಪಿತರಾದ ನಿಮ್ಮಗಳ ಮೇಲೆ ಮಾಡುವ ದೋಷಾರೋಪಣೆ ಏನೆಂದರೆ-

ದಿನಾಂಕ 18.06.2024 ರಂದು ಬೆಳಿಗ್ಗೆ 12.30 ಗಂಟೆ ಸಮಯದಲ್ಲಿ ಗಬ್ಬೂರು ಪೊಲೀಸ್ ಠಾಣಾ ಸರಹದ್ದು, ದೇವದುರ್ಗ ತಾಲ್ಲೂಕು, ಗಲಗ ಗ್ರಾಮದಲ್ಲಿ ಆರೋಪಿತರಾದ ನೀವು ಸಾಕ್ಷಿ-1 ರವರ ಹೊಲವನ್ನು ಒತ್ತುವರಿ ಮಾಡಿದ್ದು, ಸಾಕ್ಷಿ-1 ರವರು ಯಾಕೆ ಒತ್ತುವರಿ ಮಾಡಿದ್ದಿರಿ ಎಂದು ಕೇಳಿದಕ್ಕೆ 1 ನೇ ಆರೋಪಿತರಾದ ನೀವು ಸಾಕ್ಷಿ-1 ರವರಿಗೆ ಕೈಯಿಂದ ಹೊಡೆದು ಆ ಮೂಲಕ ಭಾರತ ದಂಡ ಸಂಹಿತೆ ಕಲಂ.323 ಸಹ ಕಲಂ.34 ಅಡಿಯಲ್ಲಿ ಶಿಕ್ಷಾರ್ಹ ಅಪರಾಧ ಮಾಡಿರುವಿರಿ.

ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ 2 ನೇ ಆರೋಪಿತರಾದ ನೀವು ಚಾಸಾ-1 ರವರಿಗೆ ಕಟ್ಟಿಗೆಯಿಂದ ಬೆನ್ನಿಗೆ ಮತ್ತು ಮೈಕೈಗೆ ಹೊಡೆದಿದ್ದು ಹಾಗೂ 1 ನೇ ಆರೋಪಿತರಾದ ನೀವು ಅಲ್ಲಿಯೇ ಬಿದ್ದಿದ್ದ ಕಲ್ಲಿನಿಂದ ಸಾಕ್ಷಿ-1 ರವರಿಗೆ ಎದೆಗೆ

ಗುದ್ದಿ ತಲೆಗೆ ಹೊಡೆದು ಒಳಪೆಟ್ಟುಗೊಳಿಸಿ, ಆ ಮೂಲಕ ಭಾರತ ದಂಡ ಸಂಹಿತೆ ಕಲಂ 324 ಸಹ ಕಲಂ.34 ಅಡಿಯಲ್ಲಿ ಶಿಕ್ಷಾರ್ಹ ಅಪರಾಧ ಮಾಡಿರುವಿರಿ.

ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ 1 ನೇ ಆರೋಪಿತರಾದ ನೀವು ಚಾಸಾ-1 ರವರಿಗೆ ಎಲೇ ಸೂಳೆ ಮಗನೆ ನಾನು ಏನು ಬೇಕಾದರೂ ಮಾಡುತ್ತೇನೆ ನೀನು ಏನು ಮಾಡಿಕೊಳ್ಳುತ್ತಿಯಾ ಮಾಡಿಕೋ ಅಂತಾ ಅವಾಚ್ಯವಾಗಿ ಬೈದು ಆ ಮೂಲಕ ಭಾರತ ದಂಡ ಸಂಹಿತೆ ಕಲಂ 504 ಸಹ ಕಲಂ.34 ಅಡಿಯಲ್ಲಿ ಶಿಕ್ಷಾರ್ಹ ಅಪರಾಧ ಮಾಡಿರುವಿರಿ.

ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ 1 ನೇ ಆರೋಪಿತರಾದ ನೀವು ಚಾಸಾ-1 ರವರಿಗೆ ಇವಾಗ ಉಳಿದಿಯಾ ಇನ್ನೊಮ್ಮೆ ನಮ್ಮ ತಂಟೆಗೆ ಬಂದರೆ ನಿನ್ನನ್ನು ಜೀವ ಸಹಿತ ಬಿಡುವುದಿಲ್ಲಾ ಇಲ್ಲೆ ಹೊಲದಲ್ಲಿ ನಿನ್ನನ್ನು ಹೂತು ಹಾಕಿ ಬಿಡುತ್ತೇನೆ ಅಂತಾ ಜೀವದ ಬೆದರಿಕೆಯನ್ನು ಹಾಕಿದ್ದು, ಭಾರತ ದಂಡ ಸಂಹಿತೆ ಕಲಂ 506 ಸಹ ಕಲಂ.34 ಅಡಿಯಲ್ಲಿ ಶಿಕ್ಷಾರ್ಹ ಅಪರಾಧ ಮಾಡಿರುವಿರಿ.

ಸದರೀ ಅಪರಾಧಗಳು ಈ ನ್ಯಾಯಾಲಯದ ಸಂಜ್ಞೆಯಲ್ಲಿ ಬರುತ್ತವೆ ಮತ್ತು ಸದರಿ ವಿಚಾರಣೆಯು ನನ್ನ ಸಮಕ್ಷಮ ನಡೆಯಬೇಕೆಂದು ಈ ಮೂಲಕ ನಿರ್ದೇಶಿಸುತ್ತೇನೆ.

(ಈ ದೋಷಾರೋಪಣೆಯನ್ನು ಈ ದಿನ ದಿನಾಂಕಃ 25.07.2025 ರಂದು ಆರೋಪಿತರಿಗೆ ತೆರೆದ ನ್ಯಾಯಾಲಯದಲ್ಲಿ ಕನ್ನಡ ಭಾಷೆಯಲ್ಲಿ ಓದಿ ಹೇಳಿ ಆತನ ಉತ್ತರವನ್ನು ಯಥಾವತ್ತಾಗಿ ದಾಖಲಿಸಿದೆ)

ಓ. ಹೇ. ಕೇ. ಸರಿ ಇದೆ.

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಜೆಎಂಎಫ್ ಸಿ ದೇವದುರ್ಗ.

**ಹಿರಿಯ ಸಿವಿಲ್ ನ್ಯಾಯಾಧಿಶರು ಮತ್ತು ಜೆಎಂಎಫ್ ಸಿ ರವರ ನ್ಯಾಯಾಲಯ,**

**ದೇವದುರ್ಗ.**

**ಸಿ.ಸಿ. ನಂ.700/2024**

ದೂರುದಾರರುಃ ಕರ್ನಾಟಕ ರಾಜ್ಯ,
ಗಬ್ಬೂರು ಪೋಲಿಸ್ ಠಾಣೆ.

**ವಿರುದ್ದ**

ಆರೋಪಿತರುಃ

1. ಧರ್ಮನಗೌಡ ತಂದೆ ಪರ್ವತರೆಡ್ಡಿ,
ವಯಸ್ಸು: 50 ವರ್ಷಗಳು, ಉಃ ಒಕ್ಕಲುತನ,

2. ವಿಶಾಲಾಕ್ಷಿ ಗಂಡ ಧರ್ಮನಗೌಡ,
ವಯಸ್ಸು: 45 ವರ್ಷಗಳು, ಉಃ ಮನೆಕೆಲಸ,
ಇಬ್ಬರೂ ಸಾಃ ಗಲಗ, ತಾಃ ದೇವದುರ್ಗ.

**:: ಆಪಾದನೆ ::**

1. ನಿಮಗೆ ಓದಿ ಹೇಳಿದ ಆಪಾದನೆ ಅರ್ಥವಾಯಿತಾ?

ಉತ್ತರಃ-

2. ನೀವು ತಪ್ಪು ಒಪ್ಪಿಕೊಳ್ಳುವಿರೋ ಅಥವಾ ವಿಚಾರಣೆ ಆಗಬೇಕಾ?

ಉತ್ತರಃ-

ಮೇಲಿನ ಹೇಳಿಕೆಯನ್ನು ಆಪಾದಿತರಿಗೆ ತಿಳಿಯುವಂತೆ ಆತನ ಭಾಷೆಯಲ್ಲಿ ಓದಿ, ಹೇಳಿ ತಿಳಿಸಿ ಅವರ ಹೇಳಿಕೆ ಪಡೆದುದಾಗಿ ದೃಢೀಕರಿಸಿರುತ್ತೇನೆ.

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಜೆಎಂಎಫ್‌ಸಿ., ದೇವದುರ್ಗ.

ಆರೋಪಿತರ ಸಹಿ